ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	508
ಸದಸ್ಯರ ಹೆಸರು	:	ಶ್ರೀ ಎಸ್.ಎಸ್. ಬೋಸ್‌ರಾಜು (ವಿಧಾನಸಭಾ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	09-03-2020
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು

	ಪ್ರಶ್ನೆ	ಉತ್ತರ
(ಅ)	ರಾಯಚೂರು ಜಿಲ್ಲೆಯಲ್ಲಿರುವ ವಿವಿಧ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಕೊಠಡಿಗಳು ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ಬಂದಿದೆ. 2019-20ನೇ ಸಾಲಿನಲ್ಲಿ ರಾಜ್ಯವಲಯ ಯೋಜನೆಯಡಿ ಮತ್ತು ವಿಶೇಷ ಅಭಿವೃದ್ಧಿ ಯೋಜನೆಯಡಿ ರಾಯಚೂರು ಜಿಲ್ಲೆಯ 2 ಪ್ರಾಥಮಿಕ ಶಾಲೆಗಳಿಗೆ 5 ಕೊಠಡಿಗಳ ನಿರ್ಮಾಣಕ್ಕಾಗಿ ರೂ.53.00 ಲಕ ಅನುದಾನ ಹಾಗೂ 16 ಪ್ರೌಢಶಾಲೆಗಳ 17 ಕೊಠಡಿಗಳ ನಿರ್ಮಾಣಕ್ಕಾಗಿ ರೂ.267.75 ಲಕ್ಷಗಳ ಅನುದಾನ ಮಂಜೂರು ಮಾಡಲಾಗಿದೆ.
(ಆ)	ರಾಯಚೂರು ಜಿಲ್ಲೆಯಲ್ಲಿರುವ ಒಟ್ಟು ಪ್ರೌಢ ಶಾಲೆಗಳು ಎಷ್ಟು;	ರಾಯಚೂರು ಜಿಲ್ಲೆಯಲ್ಲಿರುವ ಒಟ್ಟು ಪ್ರೌಢ ಶಾಲೆಗಳು - 205
(ಇ)	ರಾಯಚೂರು ನಗರದಲ್ಲಿ "ಶಿಕ್ಷಕರ ಭವನ" ನಿರ್ಮಾಣ ಮಾಡಲು ಸರ್ಕಾರದ ಅನುದಾನದಲ್ಲಿ ಅವಕಾಶವಿದೆಯೇ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ರಾಯಚೂರು ನಗರದಲ್ಲಿ ಶಿಕ್ಷಕರ ಭವನ ನಿರ್ಮಾಣಕ್ಕೆ ಸಂಬಂಧಿಸಿದಂತೆ ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಂದ ರೂ.1.00 ಕೋಟಿ ಅನುದಾನ ನಿಗದಿಯಾಗಿದ್ದು, ಜಿಲ್ಲಾ ಮಟ್ಟದಲ್ಲಿ ಸಮಿತಿ ರಚಿಸಲಾಗಿದೆ. ಸಮಿತಿ ಹೆಸರಿಗೆ ನಿವೇಶನ ನೊಂದಾಯಿಸುವ ಪ್ರಕ್ರಿಯೆ ಹಾಗೂ ಸಮಿತಿಯ ಹೆಸರಿನಲ್ಲಿ ಖಾತೆ ತೆರೆಯುವ ಪ್ರಕ್ರಿಯೆ ಜಾರಿಯಲ್ಲಿದೆ.
(ಈ)	ರಾಯಚೂರು ಜಿಲ್ಲೆಯಲ್ಲಿ ಇತ್ತೀಚೆಗೆ ಫೆಬ್ರವರಿ-2020ರಲ್ಲಿ ಏಳು ಶಿಕ್ಷಕರುಗಳನ್ನು ಅಮಾನತ್ತುಗೊಳಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಸದರಿ ಶಿಕ್ಷಕರುಗಳನ್ನು ಅಮಾನತ್ತುಗೊಳಿಸಲು ಕಾರಣಗಳೇನು?	ರಾಯಚೂರು ಜಿಲ್ಲೆಯ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಿಂದ, ದಿನಾಂಕ:11.02.2020 ರಂದು 3 ಜನ ಮುಖ್ಯಶಿಕ್ಷಕರು, ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಹಾಗೂ 01 ಪ್ರಭಾರ ಮುಖ್ಯ ಶಿಕ್ಷಕರು, ಸರ್ಕಾರಿ ಪ್ರೌಢ ಶಾಲೆ ಇವರೂ ಸೇರಿದಂತೆ ಒಟ್ಟು 04 ಜನ ಶಿಕ್ಷಕರುಗಳನ್ನು ಕಳಪೆ ಗುಣಮಟ್ಟದ ಶೂ ಮತ್ತು ಸಾಕ್ಸ್ ಖರೀದಿಸಿ ಮಕ್ಕಳಿಗೆ ಸರಬರಾಜು ಮಾಡಿರುವ ಆರೋಪದಡಿ ಸೇವೆಯಿಂದ ಅಮಾನತ್ತು ಮಾಡಲಾಗಿರುತ್ತದೆ.

ಇಪಿ 58 ಯೋಸಕ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು